## ಕರ್ನಾಟಕ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 484
2. ಸದಸ್ಯರ ಹೆಸರು : ಶ್ರೀ ಗೋವಿಂದರಾಜು (ವಿಧಾನಸಭೆಯಿಂದ ಚುನಾಯಿತರಾದವರು)
3. ಉತ್ತರಿಸಬೇಕಾದ ದಿನಾಂಕ : 19.02.2024
4. ಉತ್ತರಿಸಬೇಕಾದ ಸಚಿವರು : ವೈದ್ಯಕೀಯ ಶಿಕ್ಷಣ ಸಚಿವರು

| ಕ್ರ. ಸಂ | ಪ್ರಶ್ನೆಗಳು | ಉತ್ತರಗಳು |
|---|---|---|
| (ಅ) | ಬೆಂಗಳೂರು ಕೇಂದ್ರ ಭಾಗದಲ್ಲಿರುವ ಕಿದ್ವಾಯಿ ಕ್ಯಾನ್ಸರ್ ಆಸ್ಪತ್ರೆಯಲ್ಲಿ ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ವೈದ್ಯರು ಹಾಗೂ ಇನ್ನಿತರ ಸಿಬ್ಬಂದಿಗಳ ಸಂಖ್ಯೆಯೆಷ್ಟು; (ಖಾಯಂ ಮತ್ತು ಗುತ್ತಿಗೆಯನ್ನು ಒಳಗೊಂಡಂತೆ ಮಾಹಿತಿಯನ್ನು ಒದಗಿಸುವುದು) | ಈ ಬಗ್ಗೆ ಮಾಹಿತಿಯನ್ನು **ಅನುಬಂಧ -1**ರಲ್ಲಿ ನೀಡಲಾಗಿದೆ. |
| (ಆ) | ಕಳೆದ 5 ವರ್ಷದಿಂದ ಇಲ್ಲಿಯವರೆಗೂ ಕಿದ್ವಾಯಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದುಕೊಂಡಿರುವ ರೋಗಿಗಳ ಸಂಖ್ಯೆಯೆಷ್ಟು; ಇದರಲ್ಲಿ ಫಾಲೋಅಪ್ ಚಿಕಿತ್ಸೆ ಪಡೆಯುತ್ತಿರುವವರ ಸಂಖ್ಯೆಯೆಷ್ಟು; | ಕಿದ್ವಾಯಿ ಸಂಸ್ಥೆಯಲ್ಲಿ ಕಳೆದ 5 ವರ್ಷಗಳಿಂದ 57,775 ರೋಗಿಗಳು ಕ್ಯಾನ್ಸರ್ ಖಾಯಿಲೆಗೆ ಚಿಕಿತ್ಸೆಯನ್ನು ಪಡೆದಿದ್ದು, ಇವರ ಪೈಕಿ 21,951 ರೋಗಿಗಳು ಅನುಸರಣಾ (ಫಾಲೋಅಪ್) ಭೇಟಿಯಲ್ಲಿ ವಿವಿಧ ರೀತಿಯ ಕ್ಯಾನ್ಸರ್ ಚಿಕಿತ್ಸೆ ಪಡೆದಿದ್ದಾರೆ. |
| (ಇ) | ಸರ್ಕಾರ ಕಳೆದ ಐದು ವರ್ಷದಲ್ಲಿ ಬಿಡುಗಡೆ ಮಾಡಿರುವ ಅನುದಾನವೆಷ್ಟು; ಇದರಲ್ಲಿ ಕೇಂದ್ರ ಸರ್ಕಾರ ಮತ್ತು ರಾಜ್ಯ ಸರ್ಕಾರದ ಪಾಲೆಷ್ಟು; ಹಾಗೂ ಅನುದಾನದ ಕೊರತೆ ಇದೆಯೇ; | ಈ ಬಗ್ಗೆ ಮಾಹಿತಿಯನ್ನು **ಅನುಬಂಧ -2**ರಲ್ಲಿ ನೀಡಲಾಗಿದೆ. |
| (ಈ) | ಆಸ್ಪತ್ರೆಯಲ್ಲಿ ವೈದ್ಯರನ್ನು ಒಳಗೊಂಡಂತೆ ಸಿಬ್ಬಂದಿಗಳ ಸಂಖ್ಯೆಯಲ್ಲಿ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರ ತೆಗೆದುಕೊಂಡ ಕ್ರಮಗಳೇನು; ಹಾಗೂ ಆಸ್ಪತ್ರೆಯಲ್ಲಿ ರೋಗಿಗಳು ಪ್ರತಿನಿತ್ಯ ಚಿಕಿತ್ಸೆಗಾಗಿ ಹರಸಾಹಸ ಪಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಕಿದ್ವಾಯಿ ಸ್ಮಾರಕ ಗಂಥಿ ಸಂಸ್ಥೆಯಲ್ಲಿ ವಾರ್ಷಿಕ 21,000 ಕ್ಕೂ ಹೆಚ್ಚು ಕ್ಯಾನ್ಸರ್ ರೋಗಿಗಳು ಪ್ರತಿ ವರ್ಷ ಕ್ಯಾನ್ಸರ್ ಚಿಕಿತ್ಸೆಗಾಗಿ ಭೇಟಿ ನೀಡುತ್ತಿದ್ದಾರೆ ಹಾಗೂ ಅಂದಾಜು 3,50,000 ರೋಗಿಗಳು ತಮ್ಮ ಅನುಸರಣಾ ತಪಾಸಣೆಗಾಗಿ ಭೇಟಿ ನೀಡುತ್ತಿದ್ದು, ಸಂಸ್ಥೆಯಲ್ಲಿ ಹಾಸಿಗೆಗಳ ಸಂಖ್ಯೆಯನ್ನು 850 ಕ್ಕೆ ಏರಿಸಲಾಗಿದೆ.<br><br>ಅಲ್ಲದೇ ಕಿದ್ವಾಯಿ ಸ್ಮಾರಕ ಗಂಥಿ ಸಂಸ್ಥೆಯು ರಾಜ್ಯದಲ್ಲಿಯೇ ಪೆಟ್ ಸ್ಕ್ಯಾನ್ ತಪಾಸಣೆ ಹಾಗೂ ಬಿಎಂಟಿ (ಬೋನ್ ಮ್ಯಾರೋ ಟ್ರಾನ್ಸ್ ಪ್ಲಾಂಟ್) ಚಿಕಿತ್ಸೆಯ ಸೌಲಭ್ಯವನ್ನು ಹೊಂದಿರುವ ಏಕೈಕ ಸರ್ಕಾರಿ ಆಸ್ಪತ್ರೆಯಾಗಿರುತ್ತದೆ ಹಾಗೂ ಸರ್ಕಾರವು ಸಂಸ್ಥೆಯಲ್ಲಿನ ಕ್ಯಾನ್ಸರ್ ರೋಗಿಗಳಿಗೆ ವಿವಿಧ ಯೋಜನೆಗಳಾದ ESI, CGHS, ಯಶಸ್ವಿನಿ, ರಾಷ್ಟ್ರೀಯ ಆರೋಗ್ಯ ನಿಧಿ, ಜ್ಯೋತಿ ಸಂಜೀವಿನಿ ಯೋಜನೆ ಅಡಿಯಲ್ಲಿ, ಬಿಪಿಎಲ್ ಕಾರ್ಡ್‌ದಾರರಿಗೆ ಉಚಿತವಾಗಿ ಚಿಕಿತ್ಸೆಯನ್ನು ಕಲ್ಪಿಸಲಾಗಿದೆ.<br><br>ಸಂಸ್ಥೆಯಲ್ಲಿನ ಸಿಬ್ಬಂದಿಗಳ ಕೊರತೆಯನ್ನು ನೀಗಿಸುವ ಸಲುವಾಗಿ ಖಾಲಿ ಇರುವ |

| | | |
|---|---|---|
| | | ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರದಿಂದ ಅನುಮೋದನೆ ನೀಡಲಾಗಿರುತ್ತದೆ. |
| (ಉ) | ಕಿದ್ವಾಯಿ ಆಸ್ಪತ್ರೆಗೆ ಬೇರೆ ಬೇರೆ ಜಿಲ್ಲೆಗಳಿಂದ ರೋಗಿಗಳನ್ನು ಕರೆತರಲು ಕಷ್ಟವಾಗಿರುವುದರಿಂದ, ರಾಜ್ಯದ ಎಲ್ಲಾ ಜಿಲ್ಲಾ ಕೇಂದ್ರಗಳಲ್ಲಿ ಪ್ರತ್ಯೇಕವಾಗಿ ಕ್ಯಾನ್ಸರ್ ಆಸ್ಪತ್ರೆಯನ್ನು ತೆರೆಯುವ ಉದ್ದೇಶ ಸರ್ಕಾರ ಹೊಂದಿದೆಯೇ; | ರಾಜ್ಯದಲ್ಲಿ ಹೆಚ್ಚುತ್ತಿರುವ ಕ್ಯಾನ್ಸರ್ ರೋಗಿಗಳ ಚಿಕಿತ್ಸೆಗಾಗಿ ರಾಜ್ಯದ ವಿವಿಧ ಕಡೆಗಳಲ್ಲಿ ಪ್ರಾದೇಶಿಕ ಕ್ಯಾನ್ಸರ್ ಕೇಂದ್ರಗಳನ್ನು ಸ್ಥಾಪಿಸಲು ಕ್ರಮಕೈಗೊಂಡಿದ್ದು, ಅವುಗಳು ಈ ಕೆಳಕಂಡಂತಿವೆ.<br>a) ಪ್ರಾದೇಶಿಕ ಕ್ಯಾನ್ಸರ್ ಕೇಂದ್ರ, ಮೈಸೂರು.<br>b) ಪ್ರಾದೇಶಿಕ ಕ್ಯಾನ್ಸರ್ ಕೇಂದ್ರ, ತುಮಕೂರು.<br>c) ಪ್ರಾದೇಶಿಕ ಕ್ಯಾನ್ಸರ್ ಕೇಂದ್ರ, ಶಿವಮೊಗ್ಗ.<br>d) ಪ್ರಾದೇಶಿಕ ಕ್ಯಾನ್ಸರ್ ಕೇಂದ್ರ, ಬೆಳಗಾವಿ. |
| (ಊ) | ಸರ್ಕಾರದ ಆಸ್ಪತ್ರೆಗಳ ಮೇಲೆ ಒತ್ತಡವನ್ನು ಕಡಿಮೆ ಮಾಡಲು, ವೈದ್ಯಕೀಯ ಕಾಲೇಜಿನಲ್ಲೇ ಕ್ಯಾನ್ಸರ್ ಉಪ ಕೇಂದ್ರಗಳನ್ನು ಆರಂಭಿಸಲು ಸರ್ಕಾರ ಚಿಂತನೆ ನಡೆಸಿದೆಯೇ? | ಹೌದು.<br>ಸರ್ಕಾರದ ಆಸ್ಪತ್ರೆಗಳ ಮೇಲೆ ಒತ್ತಡವನ್ನು ಕಡಿಮೆ ಮಾಡಲು ಕರ್ನಾಟಕ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಹುಬ್ಬಳ್ಳಿ ಇಲ್ಲಿ ಕ್ಯಾನ್ಸರ್ ಕೇಂದ್ರವನ್ನು ಸ್ಥಾಪಿಸಲಾಗಿದೆ.<br>ಮಂಡ್ಯ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯಲ್ಲಿ ಕ್ಯಾನ್ಸರ್ ಚಿಕಿತ್ಸಾ ಕೇಂದ್ರದ ಸ್ಥಾಪನೆಯು ಪ್ರಗತಿಯ ಹಂತದಲ್ಲಿದೆ.<br>ಕಲಬುರಗಿಯಲ್ಲಿ ಈಗಾಗಲೇ ಕಿದ್ವಾಯಿ ಪ್ರಾದೇಶಿಕ ಕೇಂದ್ರವನ್ನು ಸ್ಥಾಪಿಸಲಾಗಿದೆ.<br>ಕಾರವಾರದಲ್ಲಿ ಕ್ಯಾನ್ಸರ್ ಚಿಕಿತ್ಸಾ ಕೇಂದ್ರದ ಸ್ಥಾಪನೆಯು ಪ್ರಗತಿಯ ಹಂತದಲ್ಲಿದೆ. |

**ಸಂಖ್ಯೆ:** ಎಂಇಡಿ 38 ಕೆಯುಎಂ 2024

**(ಡಾ. ಶರಣಪ್ರಕಾಶ ಆರ್. ಪಾಟೀಲ)**
ವೈದ್ಯಕೀಯ ಶಿಕ್ಷಣ ಹಾಗೂ
ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು
ಜೀವನೋಪಾಯ ಸಚಿವರು.

ಅನುಬಂಧ - 1

1) ಕಿದ್ವಾಯಿ ಸ್ಮಾರಕ ಗಂಥಿ ಸಂಸ್ಥೆಯು ಸರ್ಕಾರದ ಒಂದು ಸ್ವಾಯತ್ತ ಸಂಸ್ಥೆಯಾಗಿರುತ್ತದೆ. ಈ ಸಂಸ್ಥೆಯು ವೈದ್ಯಕೀಯ ಶಿಕ್ಷಣ ಇಲಾಖೆಯಡಿ ಕಾರ್ಯನಿರ್ವಹಿಸುತ್ತದೆ. ಕಿದ್ವಾಯಿ ಸ್ಮಾರಕ ಗಂಥಿ ಸಂಸ್ಥೆಯಲ್ಲಿ ಹಾಗೂ ಸಂಸ್ಥೆಯ ಪೆರಿಫೆರಲ್ ಕ್ಯಾನ್ಸರ್ ಕೇಂದ್ರ, ಕಲ್ಬುರ್ಗಿ ಇಲ್ಲಿನ ಗ್ರೂಪ್-ಎ, ಗ್ರೂಪ್-ಬಿ, ಗ್ರೂಪ್-ಸಿ ಮತ್ತು ಗ್ರೂಪ್-ಡಿ ವೃಂದದಲ್ಲಿ ಮಂಜೂರಾಗಿರುವ, ಕಾರ್ಯನಿರ್ವಹಿಸುತ್ತಿರುವ ಹಾಗೂ ಖಾಲಿ ಇರುವ ಹುದ್ದೆಗಳ ಮಾಹಿತಿಯನ್ನು ಈ ಕೆಳಕಂಡಂತೆ ನೀಡಲಾಗಿದೆ.

| ಕಿದ್ವಾಯಿ ಸ್ಮಾರಕ ಗಂಥಿ ಸಂಸ್ಥೆ, ಬೆಂಗಳೂರು | | | | | | | |
|---|---|---|---|---|---|---|---|
| ಕ್ರ ಸ | ಗ್ರೂಪ್ | ಮಂಜೂರಾದ ಹುದ್ದೆಗಳ ಸಂಖ್ಯೆ | ಕರ್ತವ್ಯ ನಿರ್ವಹಿಸುತ್ತಿರುವ ಹುದ್ದೆಗಳ ಸಂಖ್ಯೆ (ಖಾಯಂ) | ಖಾಲಿ ಇರುವ ಹುದ್ದೆಗಳ ಸಂಖ್ಯೆ | ಕರ್ತವ್ಯ ನಿರ್ವಹಿಸುತ್ತಿರುವ ಹುದ್ದೆಗಳ ಸಂಖ್ಯೆ (ಗುತ್ತಿಗೆ) | ಕರ್ತವ್ಯ ನಿರ್ವಹಿಸುತ್ತಿರುವ ಹುದ್ದೆಗಳ ಸಂಖ್ಯೆ (ಹೊರಗುತ್ತಿಗೆ) | ಕರ್ತವ್ಯ ನಿರ್ವಹಿಸುತ್ತಿರುವ ಹುದ್ದೆಗಳ ಸಂಖ್ಯೆ (ತದರ್ಥ / Adhoc) |
| 1 | ಗ್ರೂಪ್ 'ಎ' ಬೋದಕ | 202 | 111 | 91 | 03 | - | 22 |
| | ಬೋಧಕೇತರ | 40 | 28 | 12 | 01 | - | |
| 2 | ಗ್ರೂಪ್ 'ಬಿ' | 118 | 43 | 75 | - | 21 | 08 |
| 3 | ಗ್ರೂಪ್ 'ಸಿ' | 1109 | 420 | 689 | 01 | 634 | |
| 4 | ಗ್ರೂಪ್ 'ಡಿ' | 298 | 59 | 239 | - | 595 | |
| | **ಒಟ್ಟು** | **1767** | **661** | **1106** | **05** | **1250** | **40** |

ಅನುಬಂಧ - 2

ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ.ಗೋವಿಂದರಾಜು ಇವರ ಚುಕ್ಕೆ ಗುರುತಿನ ಪ್ರಶ್ನೆ.ಸಂಖ್ಯೆ.484.

ಇ) ಸರ್ಕಾರ ಕಳೆದ ಐದು ವರ್ಷದಲ್ಲಿ ಬಿಡುಗಡೆಮಾಡಿರುವ ಅನುದಾನವೆಷ್ಟು; ಇದರಲ್ಲಿ ಕೇಂದ್ರ ಸರ್ಕಾರ ಮತ್ತು ರಾಜ್ಯ ಸರ್ಕಾರದ ಪಾಲೆಷ್ಟು; ಹಾಗೂ ಅನುದಾನದ ಕೊರತೆಯಿದೆಯೇ;

ಸದರಿ ಪ್ರಶ್ನೆಗೆ ಈ ಕೆಳಕಂಡಂತೆ ಉತ್ತರಿಸಲಾಗಿದೆ.(ರಾಜ್ಯ ಸರ್ಕಾರದಿಂದ ಬಿಡುಗಡೆಯಾದ ಅನುದಾನದ ವಿವರ)

| ಕ್ರಮ ಸಂಖ್ಯೆ | ವರ್ಷ | ಬಿಡುಗಡೆಯಾದ ಅನುದಾನ ( ರೂ. ಲಕ್ಷಗಳಲ್ಲಿ) | ಷರಾ |
|---|---|---|---|
| 1 | 2018-19 | 10512.56 | |
| 2 | 2019-20 | 12010.59 | |
| 3 | 2020-21 | 14425.46 | |
| 4 | 2021-22 | 15649.55 | |
| 5 | 2022-23 | 19725.50 | |

ಪಿಸಿಸಿ ಕಲಬುರ್ಗಿ

| ಕ್ರಮ ಸಂಖ್ಯೆ | ವರ್ಷ | ಬಿಡುಗಡೆಯಾದ ಅನುದಾನ (ರೂ.ಲಕ್ಷಗಳಲ್ಲಿ) | ಷರಾ |
|---|---|---|---|
| 1 | 2018-19 | 730.46 | |
| 2 | 2019-20 | 849.00 | |
| 3 | 2020-21 | 956.72 | |
| 4 | 2021-22 | 880.00 | |
| 5 | 2022-23 | 979.76 | |

ವಿ.ಸೂ: ಕೇಂದ್ರ ಸರ್ಕಾರದಿಂದ ಕಳೆದ ಐದು ವರ್ಷಗಳಲ್ಲಿ ಕಿದ್ವಾಯಿ ಸಂಸ್ಥೆಗೆ ಯಾವುದೇ ಅನುದಾನ ಬಿಡುಗಡೆಯಾಗಿರುವುದಿಲ್ಲ.

13/02/2024

FINANCIAL ADVISER
KIDWAI MEMORIAL INSTITUTE OF ONCOLOGY
CANCER RESEARCH AND TRAINING CENTER
DR. M.H. MARIGOWDA ROAD,
BENGALURU-560 029